**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಗ್ಗಡದೇವನಕೋಟೆ**

# C.C.No.554/2017

| | | | |
|---|---|---|---|
| ಸಾಕ್ಷಿದಾರರ ಹೆಸರು | : | ವೇಣುಗೋಪಾಲ | CW-02 |
| ತಂದೆಯ /ಗಂಡನ ಹೆಸರು | : | ರೇವನಾಯಕ | PW-01 |
| ವಯಸ್ಸು | : | 37 | - |
| ಉದ್ಯೋಗ | : | ವ್ಯವಸಾಯ | ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕಃ **25.11.2022.** |
| ವಾಸಸ್ಥಳ | : | ಬೋರೆದೇವರಮುಂಟಿ ಗ್ರಾಮ | - |

**ಮುಖ್ಯ ವಿಚಾರಣೆಃ ಎಪಿಪಿ ರವರಿಂದಃ**

ಆರೋಪಿ ನನಗೆ ಗೊತ್ತು. ಚಾಸಾ-3 ರವರು ಗೊತ್ತು. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸುವಂತೆ ಹೇಳಿದ್ದು ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು ಅದನ್ನು ನಿಪಿ-1 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಪೊಲೀಸರು ನನ್ನ ಸಮಕ್ಷಮ ಯಾವುದೇ ಅಮಾನತ್ತು ಮಹಜರ್ ಮಾಡಿಲ್ಲ. ಯಾವುದೇ ವಸ್ತುವನ್ನು ವಶಪಡಿಸಿಕೊಂಡಿಲ್ಲ. ಠಾಣೆಗೆ ಕರೆಯಿಸಿ ನನ್ನ ಸಹಿಯನ್ನು ಪಡೆದಿರುತ್ತಾರೆ. ಪೊಲೀಸರ ಮುಂದೆ ನಾನು ಯಾವುದೇ ಹೇಳಿಕೆಯನ್ನು ನೀಡಿಲ್ಲ.

**(ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಅನುಮತಿ ಕೋರಿದ್ದರಿಂದ ಅನುಮತಿಯನ್ನು ನೀಡಲಾಯಿತು)**

**ಪಾಟೀ ಸವಾಲುಃ ಎಪಿಪಿ ರವರಿಂದಃ**

ದಿನಾಂಕ 29.01.2017 ರಂದು ಸಂಜೆ 7.00 ಗಂಟೆ ಸಮಯದಲ್ಲಿ ನಾನು ಮತ್ತು ಚಾಸಾ-3 ರವರು ನಮ್ಮ ಊರಿನ ಬಸ್ ನಿಲ್ದಾಣದ ಬಳಿ ಮಾತನಾಡುತ್ತ ಕುಳಿತಿದ್ದಾಗ ಚಾಸಾ-1 ರವರು ನಮ್ಮನ್ನು ಪಂಚರಾಗಬೇಕೆಂದು ಕೋರಿಕೊಂಡ ಮೇರೆಗೆ ನಾವುಗಳು ಚಾಸಾ-1 ರವರ ಜೊತೆಗೆ ಹೋಗಿರುತ್ತೇವೆ ಎಂದರೆ ಸರಿಯಲ್ಲ. ಆರೋಪಿಯಿಂದ 90 ಎಂಎಲ್ ನ ವಿಂಡ್ಸರ್ ಡಿಲಕ್ಸ್ ವಿಸ್ಕಿಯ 50 ಪೌಚುಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಸ್ಥಳದಲ್ಲಿ ಚಾಸಾ-1 ರವರು ಮಹಜರ್ ನ್ನು ಜರುಗಿಸಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ 90 ಎಂಎಲ್ ನ ವಿಂಡ್ಸರ್ ಡಿಲಕ್ಸ್ ವಿಸ್ಕಿಯ 50 ಪೌಚುಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮಹಜರ್ ಗೆ ನಾನು ಮತ್ತು ಚಾಸಾ-3 ರವರು ಸ್ಥಳದಲ್ಲಿ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**(ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸಾ ಸ ಇ ಒ.,**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**